# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ 46, ಜೆ.ಸಿ ನಗರ, ಬೆಂಗಳೂರು.

ಸಂಖ್ಯೆ: ಸ.ಅ/ವಾ–46/ಪಿ.ಆರ್/16 /2021–22 ದಿನಾಂಕ:17–07–2021

## ವಾರ್ಡ್ ಸಮಿತಿ ಸಭೆಯ ನಡವಳಿಗಳು

**ವಿಷಯ:** ಮಾನ್ಯ ಆಯುಕ್ತರು ಬಿ.ಬಿ.ಎಂ.ಪಿ ರವರ ಆದೇಶ ಸಂಖ್ಯೆ:ಬಿ12(5)ಪಿ.ಆರ್/35/ 2020–21 ದಿನಾಂಕ: 21–09–2020. ರವರ ಆದೇಶದಂತೆ ದಿನಾಂಕ: 09–07–2021 ರಂದು ವಾರ್ಡ್ ನಂ:46 ಜೆ.ಸಿ.ನಗರದ ಸಿಟಿಜನ್ ಪಾರ್ಕ್‌ನಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು.

::ಸಭೆಗೆ ಹಾಜರಾಗಿದ್ದವರ ವಿವರಗಳು::

| ಕ್ರ.ಸಂ | ಹೆಸರು ಶ್ರೀಮತಿ/ಶ್ರೀ | ಪದನಾಮ | ಹಾಜರಾತಿ |
|---|---|---|---|
| 1. | ಶ್ರೀ.ಎಸ್.ಜಿ.ರವೀಂದ್ರ. ಭಾ.ಸ.ಸೇ | ವಾರ್ಡ್ ಸಮಿತಿ ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳು | ಹಾಜರಿ |
| 2. | ಶ್ರೀ.ಗಣೇಶ್.ಕೆ.ಎನ್ | ಕಿರಿಯ ಆರೋಗ್ಯ ಪರಿವೀಕ್ಷಕರು | ಹಾಜರಿ |
| 3. | ಡಾ.ಎಸ್.ಶ್ರೀದೇವಿ | ಆರೋಗ್ಯ ವೈಧ್ಯಾದಿಕಾರಿ | ಹಾಜರಿ |
| 4. | ಶ್ರೀ.ರವೀಂದ್ರ | ಅರಣ್ಯಾಧಿಕಾರಿ | ಗೈರು ಹಾಜರಿ |
| 5. | ಶ್ರೀ.ಹೆಚ್.ಮೂರ್ತಿ | ಕಂದಾಯ ಅಧಿಕಾರಿಗಳು | ಗೈರು ಹಾಜರಿ |
| 6. | ಸುವರ್ಣದೇವಿ.ವೈ.ಬಿ | ಬಿ.ಡಬ್ಲ್ಯೂ.ಎಸ್.ಎಸ್.ಬಿ | ಹಾಜರಿ |
| 7. | ಶ್ರೀ.ಆರ್. ಮನೋಹರ್ | ಬೆಸ್ಕಾಂ. | ಹಾಜರಿ |
| 8. | ಶ್ರೀ ಬಸವರಾಜ್ | ಪೊಲೀಸ್ ಇಲಾಖೆ | ಹಾಜರಿ |
| 9. | ಶ್ರೀ. ರಾಜಣ್ಣ | ಸಹಾಯಕ ಕಂದಾಯ ಅಧಿಕಾರಿ | ಗೈರು ಹಾಜರಿ |
| 10. | ಶ್ರೀ. ಆನಂದ್ | ಜೆ.ಇ ಬೀದಿ ದೀಪ | ಗೈರು ಹಾಜರಿ |

ವಾರ್ಡ್ ಕಾರ್ಯದರ್ಶಿಗಳಾದ ಶ್ರೀ ಗಣೇಶ್ ಕೆ.ಎನ್ (ಕಿರಿಯ ಆರೋಗ್ಯ ಪರಿವೀಕ್ಷರು) ರವರು ಸಭೆಗೆ ಹಾಜರಾದ, ಹಾಗೂ ನೋಡಲ್ ಅಧಿಕಾರಿಗಳಾದ ಶ್ರೀ.ಎಸ್.ಜಿ ರವೀಂದ್ರ (ಭಾ.ಸ.ಸೇ) ರವರಿಗೆ ಸ್ವಾಗತ ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು.

1. ದಿನ್ನೂರು ಮುಖ್ಯರಸ್ತೆಯಲ್ಲಿ ಬಿ.ಡಬ್ಲ್ಯೂ.ಎಸ್.ಎಸ್.ಬಿ ಪೈಪ್ ಲೈನ್ ಸೋರಿಕೆಯ ಬಗ್ಗೆ ಸಾರ್ವಜನಿಕರು ದೂರು ನೀಡಿದ್ದು, ಪರಿಶೀಲಿಸಿ ಕ್ರಮಕೈಗೊಳ್ಳುವುದಾಗಿ ಬಿ.ಡಬ್ಲ್ಯೂ.ಎಸ್.ಎಸ್.ಬಿ ಅಧಿಕಾರಿಗಳು ತಿಳಿಸಿದರು.
2. ವಾರ್ಡ್‌ನಲ್ಲಿರುವ ಹಲವು ಬ್ಲಾಕ್‌ಸ್ಪಾಟ್‌ಗಳ ಬಗ್ಗೆ ವಾರ್ಡ್‌ನ ಜನರಿಗೆ ಜಾಗೃತಿ ಮೂಡಿಸಲು ತಿಳಿಸಲಾಯಿತು.
3. ವಾರ್ಡ್‌ನಲ್ಲಿನ ಬ್ಲಾಕ್‌ಸ್ಪಾಟ್‌ಗಳಲ್ಲಿ ಸಿ.ಸಿ ಕ್ಯಾಮೆರಗಳನ್ನು ಅಳವಡಿಸಲಾಗಿದ್ದು, ಕ್ಯಾಮೇರಾ ಫುಟೇಜಸ್‌ಗಳನ್ನು ವೀಕ್ಷಿಸಿ ಬ್ಲಾಕ್‌ಸ್ಪಾಟ್‌ಗಳಲ್ಲಿ ಕಸ ಎಸೆಯುವವರಿಗೆ ದಂಡ ವಿಧಿಸಲು ಮಾರ್ಷಲ್ ಮತ್ತು ಆರೋಗ್ಯ ಪರಿವೀಕ್ಷಕರಿಗೆ ಸೂಚಿಸಲಾಯಿತು.
4. ವಾರ್ಡ್‌ನ ಮುಖ್ಯರಸ್ತೆಯಲ್ಲಿ ಬೀದಿ ಬದಿ ವ್ಯಾಪಾರಿಗಳು ಫುಟ್‌ಪಾತ್ ಒತ್ತುವರಿ ಮಾಡಿದ್ದು, ಅದನ್ನು ತೆರವುಗೊಳಿಸಲು ಪೊಲೀಸ್ ಇಲಾಖೆ ಮತ್ತು ಬಿ.ಬಿ.ಎಂ.ಪಿ ಅಧಿಕಾರಿಗಳಿಗೆ ಸೂಚಿಸಲಾಯಿತು.
5. ವಾರ್ಡ್‌ನ ರಸ್ತೆಗಳಲ್ಲಿ ಅನಧಿಕೃತವಾಗಿ ವಾಹನಗಳನ್ನು ನಿಲುಗಡೆ ಮಾಡಿರುವುದಾಗಿ ಸ್ಥಳೀಯ ನಿವಾಸಿಗಳು ದೂರು ನೀಡಿದ್ದು, ಕ್ರಮ ಕೈಗೊಳ್ಳಲು ಸಂಚಾರಿ ಪೊಲೀಸ್ ಅಧಿಕರಿಗಳವರಿಗೆ ಸೂಚಿಸಲಾಯಿತು.

6. ಆರ್.ಟಿ ನಗರ 1ನೇ ಮತ್ತು 2ನೆ ಬ್ಲಾಕ್‌ಗಳಲ್ಲಿ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಿರುವುದಾಗಿ ಸ್ಥಳೀಯ ನಿವಾಸಿಗಳು ದೂರು ನೀಡಿದ್ದು, ಬೆಸ್ಕಾಂ ಅಧಿಕಾರಿಗಳವರಿಗೆ ಪರಿಶೀಲನೆ ನಡೆಸಿ ಕ್ರಮಕೈಗೊಳ್ಳುವುದಾಗಿ ಸೂಚಿಸಲಾಯಿತು.

ಈ ಮೇಲಿನ ಎಲ್ಲಾ ಅಂಶಗಳಿಗೆ ಸಂಬಂಧಪಟ್ಟಂತೆ ಅಧಿಕಾರಿಗಳೊಂದಿಗೆ ಕೂಲಂಕುಶವಾಗಿ ಚರ್ಚಿಸಿದ್ದು ಸದರಿ ವಿಷಯಗಳ ಬಗ್ಗೆ ಕ್ರಮ ಕೈಗೊಳ್ಳಲು ಸರ್ವಾನುಮತದಿಂದ ತೀರ್ಮಾನಿಸಿ ವಂದನೆಗಳೊಂದಿಗೆ ಈ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಸಹಿ/-

ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್ ನಂ: 46, ಜೆ.ಸಿ ನಗರ

ಕಾರ್ಯದರ್ಶಿಗಳು
ಹಾಗೂ ಕಿರಿಯ ಆರೋಗ್ಯ ಪರಿವೀಕ್ಷಕರು
ವಾರ್ಡ್ ನಂ: 46, ಜೆ.ಸಿ.ನಗರ

**ಪ್ರತಿಯನ್ನು:-**

1. ಮಾನ್ಯ ಜಂಟಿ ಆಯುಕ್ತರು (ಪೂರ್ವ) ಬಿ.ಬಿ.ಎಂ.ಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ವಾರ್ಡ್ ಸಮಿತಿಯ ಅಧ್ಯಕ್ಷರ ಮಾಹಿತಿಗಾಗಿ ಕಳುಹಿಸಿದೆ.
3. ವಾರ್ಡ್ ಸಮಿತಿಯ ಸದಸ್ಯರುಗಳ ಮಾಹಿತಿಗಾಗಿ ಕಳುಹಿಸಿದೆ.
4. ಕಛೇರಿ ಪ್ರತಿ.